# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಮ್‌ಎಫ್‌ಸಿ ಹುನಗುಂದ ಇವರ ನ್ಯಾಯಾಲಯದಲ್ಲಿ

ಕ್ರಿಮಿನಲ್ ಮೊಕದ್ದಮೆ ನಂಃ 329/2016

ಸಿ.ಡಬ್ಲ್ಯೂ 1 ಪಿ.ಡಬ್ಲ್ಯೂ-1

| | |
|---|---|
| ಸಾಕ್ಷಿಯ ಹೆಸರು | ಃ ನಾಗಪ್ಪ ಮುಸಿಗೇರಿ |
| ತಂದೆಯ ಹೆಸರು | ಃ ಸಂಗಪ್ಪ |
| ವಯಸ್ಸು | ಃ 40 ವರ್ಷ |
| ಉದ್ಯೋಗ | ಃ ನಿರ್ವಾಹಕ, ಹುನಗುಂದ ಘಟಕ |
| ವಾಸಸ್ಥಳ | ಃ ಹುನಗುಂದ |

ದಿನಾಂಕಃ 26-08-2023 ರಂದು ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಸಅ ರವರಿಂದಃ

ನ್ಯಾಯಾಲಯದ ಮುಂದೆ ಇರುವ ಆರೋಪಿ ಕೆ.ಎಸ್.ಆರ್.ಟಿ.ಸಿ. ಬಸ್ ಚಾಲಕನಿರುತ್ತಾನೆ. ಚಾಸಾ-1 ರವರ ಪರಿಚಯ ಇಲ್ಲ. ಸದರಿ ಅಪಘಾತವನ್ನು ನಾನು ನೋಡಿರುತ್ತೇನೆ. ಸದರಿ ಅಪಘಾತ ಕ್ಯಾಂಟರ ವಾಹನ ಚಾಲಕನ ತಪ್ಪಿನಿಂದ ಆಗಿರುತ್ತದೆ. ಪೋಲಿಸರ ಮುಂದೆ ನಾನು ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಅನುಮತಿಯನ್ನು ಕೋರಿರುತ್ತಾರೆ. ನ್ಯಾಯಾಲಯದ ಮುಂದೆ ಇರುವ ದಾಖಲೆಗಳನ್ನು ಪರಿಶೀಲಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

ಪಾಟೀಸವಾಲುಃ ಸ.ಸ.ಅ ರವರಿಂದಃ

ದಿ.19-01-2016 ರಂದು ನಾನು ಇಲಕಲ ಡಿಪೋದ ಬಸ್ ನಂ.ಕೆಎ-29/ಎಎಫ್-1198 ನೇದ್ದರ ನಿರ್ವಾಹಕನಿದ್ದು ಸದರಿ ವಾಹನದ ಚಾಲಕ ಆರೋಪಿ ಇದ್ದು ನಾವು ಮುಂಜಾನೆ ಇಲಕಲದಿಂದ ಹುಬ್ಬಳ್ಳಿಗೆ ಹೋಗುವಾಗ ಆರೋಪಿ ನಮ್ಮ ಬಸ್ ನ್ನು ಅತಿ ವೇಗ ಹಾಗೂ ನಿರ್ಲಕ್ಷತನದಿಂದ ಚಲಾಯಿಸಿ ಟ್ರಾಕ್ಟರನ್ನು ಓವರಟೇಕ ಮಾಡಲು ಹೋಗಿ ಎದುರುಗಡೆ ಬರುತ್ತಿದ್ದ ಟ್ಯಾಂಕರ ವಾಹನಕ್ಕೆ ಹಾಯಿಸಿ ಅಪಘಾತ ಪಡಿಸಿ ಚಾಸಾ-1 ರವರಿಗೆ ಗಾಯ ಪಡಿಸಿರುತ್ತಾರೆ ಅಂದರೆ ಸರಿಯಲ್ಲ. ಅಪಘಾತದ ಸ್ಥಳದಲ್ಲಿದ್ದ ಅಕ್ಕಪಕ್ಕದವರು ಚಾಸಾ-1 ರವರನ್ನು ಉಪಚರಿಸಿರುತ್ತಾರೆ ಅಂದರೆ ಸರಿಯಲ್ಲ. ಸದರಿ ಅಪಘಾತ ಆರೋಪಿ ಬಸ್ ನ್ನು ಅತಿ ವೇಗ ಹಾಗೂ ನಿರ್ಲಕ್ಷತನದಿಂದ ನಡೆಸಿದ್ದರಿಂದ ಆಗಿರುತ್ತದೆ ಅಂದರೆ ಸರಿಯಲ್ಲ. ಈ ಕುರಿತು ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಅಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿ.ಪಿ.1 ಎಂದು ಗುರುತಿಸಲಾಯಿತು. ಮೇಲೆ ವಿವರವಾಗಿ ಓದಿ ಹೇಳಿದಂತೆ ನಿ.ಪಿ.1 ರಂತೆ ಹೇಳಿಕೆ ನೀಡಿದ್ದರು ಸಹ ಈಗ ಆರೋಪಿಯೊಂದಿಗೆ ರಾಜಿಯಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

pಾಟೀಸವಾಲುಃ ಆರೋಪಿಗಳ ಪರ ಶ್ರೀ. ಸಿ.ಬಿ.ಎಸ್. ವಕೀಲರಿಂದ ಃವಕೀಲರು ಪಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಪ್ರಕಾರ ಬೆರಳಚ್ಚು ಮಾಡಲಾಯಿತು.)

ಓ ಹೇ ಕೆ ಸರಿ ಇದೆ.

ಅಪರ ದಿವಾಣಿ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ ಹುನಗುಂದ.